ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಗ್ರಾಮ ಪಂಚಾಯತ್‌ಗಳ ಕಂದಾಯ ನಿವೇಶನಗಳ ಬಗ್ಗೆ

ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ(ಪದವೀಧರರ ಕ್ಷೇತ್ರ):-

1392 (1661) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬರುವ ನಿವೇಶನಗಳ ಪೈಕಿ ಕ್ರಮಬದ್ಧ ನಿವೇಶನಗಳು ಹಾಗೂ ಕ್ರಮಬದ್ಧವಲ್ಲದ ನಿವೇಶನಗಳು ಅಂದರೆ ಏನು; (ವಿವರವಾದ ಮಾಹಿತಿ ನೀಡುವುದು)

(ಆ) ಕ್ರಮಬದ್ಧವಾದ ಮತ್ತು ಕ್ರಮಬದ್ಧವಲ್ಲದ ನಿವೇಶನಗಳಿಗೆ ಪಂಚಾಯಿತಿ ವತಿಯಿಂದ ನೀಡುತ್ತಿರುವ ದಾಖಲೆ ಯಾವುವು; (ವಿವರವಾದ ಮಾಹಿತಿ ನೀಡುವುದು)

(ಇ) ಕಂದಾಯ ನಿವೇಶನ ಅಂದರೆ ಏನು; ಇವುಗಳಿಗೆ ಪಂಚಾಯಿತಿ ವತಿಯಿಂದ ನೀಡುತ್ತಿರುವ ದಾಖಲೆ ಯಾವುದು; ಇವುಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ;

(ಈ) ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಇದಕ್ಕೆ ಸಂಬಂಧಿಸಿದಂತೆ ಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು ?